# ಬಳ್ಳಾರಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ,

## ಅಧಿಸೂಚನೆ ಸಂಖ್ಯೆ:- 28/2023

## ದಿನಾಂಕ : 12ನೇ ಡಿಸೆಂಬರ್-2023.

**ವಿಷಯ:** ಬಳ್ಳಾರಿ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಆದೇಶ ಜಾರಿಕಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:**
1. ಮಾನ್ಯ ಉಚ್ಛ ನ್ಯಾಯಾಲಯದ ಪತ್ರ ಸಂಖ್ಯೆ: **LCA II-128/2012** ದಿ: **27.01.2022.**
2. ಮಾನ್ಯ ಉಚ್ಛ ನ್ಯಾಯಾಲಯದ ಪತ್ರ ಸಂಖ್ಯೆ: **LCA II-128/2012** ದಿ: **11.09.2023.**
3. Karnataka Sub-ordinate Courts (District Judiciary) (Ministerial and other posts) (Recruitment) (Amendment) Rules, 2021.
4. Karnataka Sub-ordinate Courts (Ministerial and other posts) (Recruitment) (Amendment) Rules, 2007.
5. Karnataka Civil Services (General Recruitment) Rules 1977.

**ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:16-01-2024**

ಮೇಲ್ಕಂಡ ಅಧಿಸೂಚನೆಯನ್ವಯ ಬಳ್ಳಾರಿ ಜಿಲ್ಲಾ ನ್ಯಾಯಾಂಗ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ **03** ಆದೇಶ ಜಾರಿಕಾರರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ **(ON-LINE)** ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

1. ಅರ್ಜಿಗಳನ್ನು ಕಡ್ಡಾಯವಾಗಿ ಬಳ್ಳಾರಿ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ **http://ballari.dcourts.gov.in/notice-category/recruitments/** ನಲ್ಲಿ ನೀಡಲಾದ ಲಿಂಕ್ ಮೂಲಕ ದಿನಾಂಕ:- **16.12.2023** ರಿಂದ ದಿನಾಂಕ : **16.01.2024**ರ ರಾತ್ರಿ **11.59** ರವರೆಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. ಮುಂದುವರೆದು ಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸಲು ಕಡೆಯ ದಿನಾಂಕ:-**18.01.2024** ಆಗಿರುತ್ತದೆ.

2. ಅಭ್ಯರ್ಥಿಗಳು ಅರ್ಜಿಯಲ್ಲಿ ತಮ್ಮ ಚಾಲ್ತಿಯಲ್ಲಿರುವ ದೂರವಾಣಿ ಸಂಖ್ಯೆ ಹಾಗೂ ಇ-ಮೇಲ್ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು.

3. ಆನ್‌ಲೈನ್ ಹೊರತುಪಡಿಸಿ ಖುದ್ದಾಗಿ / ಅಂಚೆ ಮೂಲಕ / ಇನ್ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## ಆದೇಶ ಜಾರಿಕಾರರು (Process Servers)

(1) ಹುದ್ದೆಗಳ ಸಂಖ್ಯೆ : **03**

(2) ವೇತನ ಶ್ರೇಣಿ: 19950-450-20400-500-22400-550-24600-600-27000-650-29600-750-32600-850-36000-950-37900.

(3) ಹುದ್ದೆಗಳ ವರ್ಗೀಕರಣ :

**ಹೈದರಾಬಾದ್- ಕರ್ನಾಟಕ ಸ್ಥಳೀಯ ವೃಂದದ ಹುದ್ದೆಗಳ ವರ್ಗೀಕರಣ (Hyderabad Karnataka Local Cadre)**

| ವರ್ಗೀಕರಣ | ಇತರೆ |
|---|---|
| ಪರಿಶಿಷ್ಟ ಜಾತಿ | 01 |
| ಪರಿಶಿಷ್ಟ ಪಂಗಡ | 01 |
| ಸಾಮಾನ್ಯ ವರ್ಗ | 01 |
| ಒಟ್ಟು | 03 |

**ವಿದ್ಯಾರ್ಹತೆ:**

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು. ವಾಹನ ಚಾಲನಾ ರಹದಾರಿ ಇರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

**ವಿಶೇಷ ಸೂಚನೆ :**

**ಎಸ್ ಎಸ್ ಎಲ್ ಸಿ ಅಂಕಗಳು ಶ್ರೇಣಿಯಲ್ಲಿದ್ದರೆ (ಗ್ರೇಡ್) ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಒಟ್ಟು ಪಡೆದ ಅಂಕಗಳನ್ನು ಆನ್‌ಲೈನ್ ಅರ್ಜಿ ನಮೂನೆಯಲ್ಲಿ ನಮೂದಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**ಆಯ್ಕೆಯ ವಿಧಾನ :**

ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ **01** ಹುದ್ದೆಗೆ **25** ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು (ಸಂಬಂಧಿಸಿದ ಮೀಸಲಾತಿಯನ್ನು ಪರಿಗಣಿಸಿ) ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ :** ಸಂದರ್ಶನವು **10** ಅಂಕಗಳನ್ನೊಳಗೊಂಡಿರುತ್ತದೆ.

**ವಯೋಮಿತಿ:**

(ಅ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಠ-18ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

(ಆ) **ಗರಿಷ್ಠ ವಯೋಮಿತಿ:**

| | |
|---|---|
| ಸಾಮಾನ್ಯ ವರ್ಗ: | **35 ವರ್ಷಗಳು.** |
| 2ಎ, 2ಬಿ, 3ಎ, 3ಬಿ : | **38 ವರ್ಷಗಳು.** |
| ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡ : ಪ್ರವರ್ಗ-1 : | **40 ವರ್ಷಗಳು** |

**ವಿಶೇಷ ಸೂಚನೆ:**

i) ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿ ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ ಮತ್ತು ವಿಧವೆಯವರಿಗೆ ಮತ್ತು ಅಂಗವಿಕಲರಿಗೆ 10 ವರ್ಷಗಳ ಸಡಿಲಿಕೆ.

ii) ಸರಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳು, ಇವುಗಳಲ್ಲಿ ಯಾವುದು ಕಡಿಮೆಯೊ ಅಷ್ಟು ವರ್ಷಗಳ ಸಡಿಲಿಕೆ.

**ನಿಗದಿತ ಅರ್ಜಿ ಶುಲ್ಕ- ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ- 2ಎ, 2ಬಿ, 3ಎ, ಮತ್ತು 3ಬಿಗೆ ಸೇರಿದ ಅಭ್ಯರ್ಥಿಗಳು. | **ರೂ.200/-** |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ , ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ. | **ಶುಲ್ಕ ವಿನಾಯತಿ** |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ **http://ballari.dcourts.gov.in/notice-category/recruitments/** ಯ **Online Recruitment** ರಲ್ಲಿ ನೀಡಲಾದ ಲಿಂಕ್ ಮುಖಾಂತರ **Online Payment through Net – Banking / Credit – Card / Debit-Card / UPI** ಸೌಲಭ್ಯದ ಮೂಲಕ ಮಾತ್ರ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್ / ಡಿಮ್ಯಾಂಡ್ ಡ್ರಾಫ್ಟ್ / ಪೋಸ್ಟಲ್ ಆರ್ಡರ್ / ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

## ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು :

1. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಒಂದು ವೇಳೆ ಅರ್ಜಿ ಸರಿಯಿಲ್ಲದಿದ್ದಲ್ಲಿ ತಿರಸ್ಕರಿಸಲಾಗುವುದು.
2. ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ತಮಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.
3. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು, ಅಳತೆಯಲ್ಲಿ **5cm** ಉದ್ದ **X 3.6cm** ಅಗಲವುಳ್ಳದ್ದಾಗಿರಬೇಕು ಮತ್ತು **50**ಕೆಬಿ ಅಳತೆಯದ್ದಾಗಿರಬೇಕು ಹಾಗೂ ಅದು**.jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿಬಣ್ಣದ್ದಾಗಿರಬೇಕು.

ಬ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಕ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ **(2.5cm** ಉದ್ದ **x 7.5cm** ಅಗಲವುಳ್ಳದ್ದಾಗಿರಬೇಕು ಮತ್ತು **26** ಕೆಬಿ ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು) ಅಪ್‌ಲೋಡ ಮಾಡಬೇಕು.

4. ಅಭ್ಯರ್ಥಿಯು **ON-LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು **download** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಕೊಳ್ಳತಕ್ಕದು ಹಾಗೂ ಸಂದರ್ಶನ ಸಮಯದಲ್ಲಿ ಅಥವಾ ನಿಗದಿಪಡಿಸಿದ ದಿನಾಂಕದಂದು ಹಾಜರು ಪಡಿಸತಕ್ಕದ್ದು.
5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

6. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ **http://ballari.dcourts.gov.in/notice-category/recruitments/** ನಲ್ಲಿ **16.01.2024** ದಿನಾಂಕದ ರಾತ್ರಿ **11-59**ರವರೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಮತ್ತು ಅರ್ಜಿ ಶುಲ್ಕ ಪಾವತಿಸಲು ಕಡೆಯ ದಿನಾಂಕಃ-**18.01.2024** ರಾತ್ರಿ **11.59**ರವರೆಗೆ ಅವಕಾಶವಿರುತ್ತದೆ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

7. ಅರ್ಹ ಅಭ್ಯರ್ಥಿಗಳಿಗೆ **SMS** ಹಾಗೂ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹರಾಗುವವರ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

8. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

9. ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವರೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವರೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವರೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವರೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವರೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವರೆಂದು ಅಥವಾ ಅವರ ನೇಮತಿಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಆಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವರೆಂದು ಕಂಡುಬಂದಲ್ಲಿ ಅವರು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಅಥವಾ ನೇಮಕಾತಿಗೊಂಡ ನಂತರವೂ ಆಯ್ಕೆ/ ನೇಮಕಾತಿಯಿಂದ ಅನರ್ಹಗೊಳ್ಳುವರು.

10. ಅಭ್ಯರ್ಥಿಗಳು ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಗಳಲ್ಲಿ **ON-LINE** ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿ ಪಡಿಸಿದ ಕೊನೆಯ ದಿನಾಂಕದವರೆಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳು ಮತ್ತು ಇತರೇ ಪ್ರಮಾಣ ಪತ್ರಗಳನ್ನು ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅವುಗಳ ಮೂಲ ಪ್ರತಿಗಳನ್ನು ಪರಿಶೀಲನೆಯ ಸಮಯದಲ್ಲಿ ಅಥವಾ ಅದಕ್ಕೂ ಮುಂಚೆ (ಕಛೇರಿಯು ನಿಗಧಿಪಡಿಸಿದ ದಿನಾಂಕದಂದು) ಹಾಜರು ಪಡಿಸಬೇಕು ಅಲ್ಲದೇ ಒಂದು ಸೆಟ್ ಸ್ವಯಂ ಧೃಢೀಕರಿಸಿರುವ ದಾಖಲೆ ಪ್ರತಿಗಳನ್ನು ಸಲ್ಲಿಸತಕ್ಕದ್ದು. ಇತರೇ ನಮೂನೆಗಳಲ್ಲಿ ಅಥವಾ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ, ತಪ್ಪಿದ್ದಲ್ಲಿ ಅವರ ಮೀಸಲಾತಿಯನ್ನು/ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

i) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ಚಲನ್/ವಿವರದ ಪ್ರತಿ.

ii) ಶೈಕ್ಷಣಿಕ ವಿದ್ಯಾರ್ಹತೆಯ ಪ್ರಮಾಣ ಪತ್ರ/ಅಂಕಪಟ್ಟಿ.

iii) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ / ವರ್ಗಾವಣೆ ಪಟ್ಟಿ/ಕ್ಯುಮುಲೇಟೀವ್ ರೆಕಾರ್ಡ್ ದಾಖಲಾತಿಗಳು.

iv) ವಯೋಮಿತಿ ಸಡಿಲಿಕೆ ಕೋರುವ ಅಥವಾ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ಯಲ್ಲಿ ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ಯಲ್ಲಿ ಮತ್ತು **2**ಎ, **2**ಬಿ, **3**ಎ ಮತ್ತು **3**ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂದಿಸಿದ ತಹಶೀಲ್ದಾರರಿಂದ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ.

v) ವಯೋಮಿತಿ ಸಡಿಲಿಕೆ ಕೋರುವ ಮಾಜಿ ಸೈನಿಕ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯೊದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.

vi) ವಯೋಮಿತಿ ಸಡಿಲಿಕೆ ಕೋರುವ ವಿದವೆಯರು, ಜೀತ ಕಾರ್ಮಿಕರು ವಯೋಮಿತಿ ರಿಯಾಯ್ತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

vii) ವಯೋಮಿತಿ ಸಡಿಲಿಕೆ ಕೋರುವ ಅಂಗವಿಕಲ ವ್ಯಕ್ತಿಗಳು ನಿಗದಿತ ನಮೂನೆಯಲ್ಲಿ ನೀಡುವ ಅಂಗವಿಕಲ ವ್ಯಕ್ತಿ ಪ್ರಮಾಣ ಪತ್ರ.

viii) ವಾಹನ ಚಾಲನ ಪರವಾನಿಗೆ ಹೊಂದಿರುವ ಅಭ್ಯರ್ಥಿಗಳು ತಮ್ಮ ವಾಹನ ಚಾಲನಾ ಪರವಾನಿಗೆ ಪತ್ರ (ಡ್ರೈವಿಂಗ್ ಲೈಸೆನ್ಸ್).

ix) ಹೈದ್ರಾಬಾದ – ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ ಅರ್ಜಿ ಸಲ್ಲಿಸುವವರು ಸರಕಾರದ ಅದಿಸೂಚನೆ ಸಂಖ್ಯೆ: **DPAR/43/HKC/2013** ಬೆಂಗಳೂರು ದಿನಾಂಕ:**29-01-2014**ರಲ್ಲಿ ನಿಗದಿಪಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು-2013ರ ನಿಯಮ 3(3)ರಲ್ಲಿ ಗೊತ್ತುಪಡಿಸಿರುವಂತೆ "ಅನುಬಂಧ-ಎ" ಯಲ್ಲಿರುವಂತೆ "ಅರ್ಹತಾ ಪ್ರಮಾಣ ಪತ್ರ" ವನ್ನು ಸಂಬಂಧಪಟ್ಟ ಸಹಾಯಕ ಆಯುಕ್ತರವರಿಂದ ಹಾಗೂ ಸೇವಾನಿರತ ಅಭ್ಯರ್ಥಿಗಳು ಸ್ವಗ್ರಾಮ ಪ್ರಮಾಣವನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ಅದಿಸೂಚನೆಯ ಕೊನೆಯ ದಿನಾಂಕದ ಒಳಗಾಗಿ ಪಡೆದಿರಬೇಕು.

11. ಅಭ್ಯರ್ಥಿಗಳು ತಮ್ಮ ಎಸ್.ಎಸ್.ಎಲ್.ಸಿ ಅಂಕಗಳು ಶ್ರೇಣಿಯಲ್ಲಿದ್ದರೆ ಅಥವಾ ಸಿಜಿಪಿಎ ಆಗಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗಧಿತ ಕಾಲಂನಲ್ಲಿ ನಮೂದಿಸಬೇಕು.

12. ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ / ಗ್ರಾಮೀಣ ವಿದ್ಯಾರ್ಥಿ ಪ್ರಮಾಣ ಪತ್ರ / ಮಾಜಿ ಸೈನಿಕರು / ವಿಧವೆಯರು / ಅಂಗವಿಕಲರು ಇವರುಗಳಿಗೆ ಸಂಬಂಧಿಸಿದಂತೆ ಕೋರಿದ ಮಾಡಿದ ಮೀಸಲಾತಿಗಳು / ವಯೋಮಿತಿ ಸಡಿಲಿಕೆ ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ ಆಗ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದಲ್ಲದೆ ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಅಂತಹ ಅಭ್ಯರ್ಥಿಯನ್ನು ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಪಡಿಸಬೇಕಾಗಬಹುದು.

13. ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದು ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.

14. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕಾನೂನು ಕ್ರಮ ಜರುಗಿಸಲಾಗುತ್ತದೆ.

15. ಅಭ್ಯರ್ಥಿಗಳ ಆಯ್ಕೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

16. ಪಿಂಚಣಿ ಸೌಲಭ್ಯ : ಸರ್ಕಾರದ ಆದೇಶ ಸಂಖ್ಯೆ : ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ : 31.03.2006 ರಂತೆ.

17. ಅಭ್ಯರ್ಥಿಯು ನೇಮಕಾತಿ ಸಂಬಂಧ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

18. ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಬಳ್ಳಾರಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

12/12/23

(ಎಸ್.ಹೆಚ್.ಪುಷ್ಪಾಂಜಲಿ ದೇವಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬಳ್ಳಾರಿ.

Prl. District and Sessions Judge
BALLARI

ಪ್ರತಿಯನ್ನು ಮಹಾ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.

Dis No 6587/2023

ಪ್ರತಿಯನ್ನು :-

(1) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು/ಬಳ್ಳಾರಿ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
(2) ಉದ್ಯೋಗ ವಿನಿಮಯ ಕಛೇರಿ, ಬಳ್ಳಾರಿ.
(3) ಬಳ್ಳಾರಿ ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ (ಇ-ಮೇಲ್ ಮೂಲಕ) ತಮ್ಮ ನ್ಯಾಯಾಲಯದ ನೋಟೀಸ್ ಬೋರ್ಡ್‌ಗಳಲ್ಲಿ ಅಂಟಿಸಲು.
(4) ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಿಗೆ ಮಾಹಿತಿಗಾಗಿ, ವ್ಯಾಪಾಕ ಪ್ರಚಾರಕ್ಕಾಗಿ ಹಾಗೂ ತಮ್ಮ ನ್ಯಾಯಾಲಯದ ನೋಟೀಸ್ ಬೋರ್ಡ್‌ಗಳಲ್ಲಿ ಅಂಟಿಸವುದಾಕ್ಕಾಗಿ. (ಇ-ಮೇಲ್ ಮೂಲಕ).
(5) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು.
(6) ಈ ಕಛೇರಿಯ ನೋಟೀಸ್ ಬೋರ್ಡ್‌ನಲ್ಲಿ ಅಂಟಿಸಲು.

END